Phone No: 91-080-2333 0149
91-080-23330984

080-23330153 Extn. 205/210
e-mail : registrar@uasbangalore.edu.in

# ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು

ಕುಲಸಚಿವರ ಕಛೇರಿ, ಜಿ.ಕೆ.ವಿ.ಕೆ., ಬೆಂಗಳೂರು – 560 065.

ಕ್ರಸಂ: ಕು.ಸ./ಸಕುಸ/ಎಸ್‌ಎಫ್‌ಎ/ಡಿಪ್ಲೊಮಾ (ರೇಷ್ಮೆಕೃಷಿ) ಪ್ರವೇಶ/2021-22 ದಿನಾಂಕ: 23.08.2021

## ಅಧಿಸೂಚನೆ

ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರಿನ ಅಧೀನದಲ್ಲಿರುವ ಕೃಷಿ ಮಹಾವಿದ್ಯಾಲಯ, ರೇಷ್ಮೆಕೃಷಿ ಕಾಲೇಜು, ಚಿಂತಾಮಣಿಯಲ್ಲಿ **2021-22ನೇ** ಸಾಲಿನ ಎರಡು ವರ್ಷಗಳ ಡಿಪ್ಲೊಮಾ (ರೇಷ್ಮೆಕೃಷಿ) [4 ಸೆಮಿಸ್ಟರ್] ಕೋರ್ಸ್‌ಗೆ ನಿಗದಿತ ನಮೂನೆಯಲ್ಲಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

**ಬೋಧನಾ ಕ್ರಮ ಮತ್ತು ಮಾಧ್ಯಮ:** ಡಿಪ್ಲೊಮಾ (ರೇಷ್ಮೆಕೃಷಿ) ಯನ್ನು ಕನ್ನಡ ಮಾಧ್ಯಮದಲ್ಲಿ ಸೆಮಿಸ್ಟರ್ ಪದ್ಧತಿಯಲ್ಲಿ ಬೋಧಿಸಲಾಗುವುದು.

**ಪ್ರವೇಶ ಅರ್ಹತೆ :**

- ಕೃಷಿ ವಿಶ್ವವಿದ್ಯಾನಿಲಯದಲ್ಲಿ ಡಿಪ್ಲೊಮಾ (ರೇಷ್ಮೆಕೃಷಿ) ಕೋರ್ಸ್‌ಗೆ ಪ್ರವೇಶ ಕೋರುವ ಅಭ್ಯರ್ಥಿಗಳು ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಕನ್ನಡ ಪಠ್ಯವನ್ನು ಭಾಷೆಯಾಗಿ ಅಭ್ಯಸಿಸಿ ಕನಿಷ್ಠ **ಶೇ.45** ಅಂಕಗಳೊಂದಿಗೆ ಉತ್ತೀರ್ಣರಾಗಿರಬೇಕು (ಪ.ಜಾ./ಪ.ಪಂ./ಪ್ರವರ್ಗ–I ರವರುಗಳಿಗೆ ಕನಿಷ್ಠ **ಶೇ.40** ಅಂಕಗಳೊಂದಿಗೆ ಉತ್ತೀರ್ಣರಾಗಿರಬೇಕು).
- ದಿನಾಂಕ.**30.04.2021** ರಂದು ಅಭ್ಯರ್ಥಿಗಳ ವಯಸ್ಸು **19** ವರ್ಷಗಳನ್ನು ಮೀರಿರಬಾರದು.
- ರೈತರ ಹಾಗು ಕೃಷಿ ಕಾರ್ಮಿಕರ ಮಕ್ಕಳಿಗೆ ಶೇ. 50ರಷ್ಟು ಸೀಟುಗಳನ್ನು ಡಿಪ್ಲೊಮಾ (ರೇಷ್ಮೆಕೃಷಿ) ಪ್ರವೇಶಾತಿಗೆ ಮೀಸಲಿಡಲಾಗಿದೆ.
- ಅರ್ಜಿ ಹಾಗೂ ಮಾಹಿತಿ ಪುಸ್ತಕವನ್ನು ಕೃಷಿ ವಿಶ್ವವಿದ್ಯಾನಿಲಯ ಜಿ.ಕೆ.ವಿ.ಕೆ., ಬೆಂಗಳೂರು–560065 ವೆಬ್‌ಸೈಟ್ **www.uasbangalore.edu.in** ನಲ್ಲಿ ದಿನಾಂಕ **23.08.2021** ರಿಂದ **22.09.2021** ರವರೆಗೆ ಡೌನ್‌ಲೋಡ್ ಮಾಡಬಹುದು. ಈ ರೀತಿ ವೆಬ್‌ಸೈಟ್ ಮುಖಾಂತರ ಪಡೆದು ಭರ್ತಿಮಾಡಿದ ಅರ್ಜಿಗಳನ್ನು, ಅರ್ಜಿಯ ನಿಗದಿತ ಶುಲ್ಕವನ್ನು ಡಿ.ಡಿ. ರೂಪದಲ್ಲಿ ಲಗತ್ತಿಸಿ ದಿನಾಂಕ **22.09.2021** ರೊಳಗೆ ಕಳುಹಿಸಿಕೊಡಬೇಕು. ದಿನಾಂಕ. **22.09.2021** ರ ನಂತರ ಡಿ.ಡಿ. ಯನ್ನು ಪಡೆದು ಸಲ್ಲಿಸುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು
- **ಅರ್ಜಿ ಹಾಗೂ ಮಾಹಿತಿ ಪುಸ್ತಕಗಳ ಶುಲ್ಕ:**
- ಸಾಮಾನ್ಯ ವರ್ಗದವರಿಗೆ ರೂ.500/–, ಪ.ಜಾ./ಪ.ಪಂ./ಪ್ರವರ್ಗ–I ರವರಿಗೆ ರೂ. 250/– ಆಗಿದ್ದು, ರಾಷ್ಟ್ರೀಕೃತ ಬ್ಯಾಂಕ್‌ಗಳ (Nationalised Bank) ಮೂಲಕ ಡಿ.ಡಿ.ಯನ್ನು **Comptroller, UAS, GKVK, Bangalore-560065** ಇವರ ಹೆಸರಿನಲ್ಲಿ ಪಡೆದು ಎಲ್ಲಾ ಅಗತ್ಯ ಅಡಕಗಳೊಂದಿಗೆ ಭರ್ತಿ ಮಾಡಿದ ಅರ್ಜಿಗಳನ್ನು ಕುಲಸಚಿವರು, ಕೃಷಿ ವಿಶ್ವವಿದ್ಯಾನಿಲಯ, ಜಿ.ಕೆ.ವಿ.ಕೆ., ಬೆಂಗಳೂರು–560065 ಇಲ್ಲಿಗೆ ದಿನಾಂಕ **22.09.2021** ರ (ಸಂಜೆ 4.00 ಗಂಟೆ) ಒಳಗೆ ತಲುಪುವಂತೆ ಖುದ್ದಾಗಿ ಅಥವಾ ಅಂಚೆ ಮೂಲಕ ಕಳುಹಿಸಬಹುದು.
- ದಿನಾಂಕ: **22.09.2021** ರ ನಂತರ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

**ಪ್ರವೇಶ ಮತ್ತು ಆಯ್ಕೆ ವಿಧಾನ :**

- ಸರ್ಕಾರದ ಆದೇಶಗಳ ಅನ್ವಯ ಸೀಟುಗಳನ್ನು ಭರ್ತಿ ಮಾಡಲಾಗುವುದು.
- ಅರ್ಹ ಅಭ್ಯರ್ಥಿಗಳನ್ನು ಮೆರಿಟ್ ಆಧಾರದ ಮೇಲೆ ರೋಸ್ಟರ್ ಪದ್ಧತಿಯನ್ನು ಅಳವಡಿಸಿ, ಪ್ರವೇಶಕ್ಕೆ ಆಯ್ಕೆ ಮಾಡಿ, ಆಯ್ಕೆಯಾದ ಅಭ್ಯರ್ಥಿಗಳಿಗೆ ಪತ್ರ ಹಾಗೂ ವೆಬ್ ಸೈಟ್ ಮುಖಾಂತರ ತಿಳಿಸಲಾಗುವುದು.

**ಟಿಪ್ಪಣಿ :** **ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯವು ಯಾವುದೇ ಉದ್ಯೋಗ ಭರವಸೆಯ ಆಧಾರದ ಮೇಲೆ ಮೇಲ್ಕಂಡ ಕೋರ್ಸ್‌ನ್ನು ನಡೆಸುವುದಿಲ್ಲ.**

ಆದೇಶದ ಮೇರೆಗೆ

ಕುಲಸಚಿವರು

ಕುಲಸಚಿವರು
ಕೃಷಿ ವಿಶ್ವವಿದ್ಯಾನಿಲಯ
ಗಾಂಧಿ ಕೃಷಿ ವಿಜ್ಞಾನ ಕೇಂದ್ರ
ಬೆಂಗಳೂರು - 560 065